Akashvani: Bangalore
National Bulletin In Kannada
28.03.2025 : 13.10hrs
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

*****************

ಮುಖ್ಯಾಂಶಗಳು :

1. ೬ನೇ ಬಿಮ್‌ಸ್ಟೆಕ್ ಶೃಂಗಸಭೆಯಲ್ಲಿ ಭಾಗವಹಿಸಲು ಏಪ್ರಿಲ್ ೩ ರಿಂದ ಎರಡು ದಿನಗಳ ಕಾಲ ಥೈಲ್ಯಾಂಡ್‌ಗೆ ಭೇಟಿ ನೀಡಲಿರುವ ಪ್ರಧಾನಿ
2. ಸ್ಪೇಡೆಕ್ಸ್ ಕಾರ್ಯಾಚರಣೆಯ ಭಾಗವಾಗಿ ರೋಲಿಂಗ್ ಪ್ರಯೋಗವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ಇಸ್ರೋ
3. ನ್ಯಾಯಮೂರ್ತಿ ಯಶವಂತ್ ವರ್ಮಾ ನಿವಾಸದಲ್ಲಿ ನಗದು ಪತ್ತೆ ಪ್ರಕರಣ: ಸುಪ್ರೀಂಕೋರ್ಟ್‌ನಲ್ಲಿಂದು ಅರ್ಜಿ ವಿಚಾರಣೆ
4. ಎಟಿಪಿ ಮಾಸ್ಟರ್ಸ್ ೧೦೦೦ ಟೆನಿಸ್ ಪಂದ್ಯಾವಳಿಯ ಸೆಮಿಫೈನಲ್ ಪ್ರವೇಶಿಸಿದ ಸರ್ಬಿಯಾದ ನೊವಾಕ್ ಜೊಕೊವಿಕ್
5. ಐಪಿಎಲ್ ಟಿ-೨೦ ಕ್ರಿಕೆಟ್: ಇಂದು ಚೆನ್ನೈ ಸೂಪರ್ ಕಿಂಗ್ಸ್ - ರಾಯಲ್ ಚ್ಯಾಲೆಂಜರ್ಸ್ ಬೆಂಗಳೂರು ಮುಖಾಮುಖಿ

***********

ಪ್ರಧಾನಿ ನರೇಂದ್ರ ಮೋದಿ ೬ನೇ ಬಿಮ್‌ಸ್ಟೆಕ್ ಶೃಂಗಸಭೆಯಲ್ಲಿ ಭಾಗವಹಿಸಲು ಏಪ್ರಿಲ್ ೩ ರಿಂದ ಎರಡು ದಿನಗಳ ಕಾಲ ಥೈಲ್ಯಾಂಡ್‌ನ ಬ್ಯಾಂಕಾಕ್‌ಗೆ ಭೇಟಿ ನೀಡಲಿದ್ದಾರೆ. ಥೈಲ್ಯಾಂಡ್ ಪ್ರಧಾನಿ ಪೇಟೊಂಗ್‌ಟಾರ್ನ್ ಶಿನವಾತ್ರ ಅವರ ಆಹ್ವಾನದ ಮೇರೆಗೆ ಅವರು ಪ್ರವಾಸ ಕೈಗೊಳ್ಳಲಿದ್ದಾರೆ. ಇದು ಪ್ರಧಾನಿ ಮೋದಿ ಅವರ ಮೂರನೇ ಥೈಲ್ಯಾಂಡ್ ಭೇಟಿಯಾಗಲಿದೆ. ಸಭೆಯಲ್ಲಿ, ಬಿಮ್‌ಸ್ಟೆಕ್ ನಾಯಕರು ಬಿಮ್‌ಸ್ಟೆಕ್ ಚೌಕಟ್ಟಿನೊಳಗೆ ಸಹಯೋಗವನ್ನು ವೃದ್ಧಿಸಲು ವಿವಿಧ ಸಂಸ್ಥೆಗಳು ಮತ್ತು ಸಾಮರ್ಥ್ಯ ವೃದ್ಧಿ ಕ್ರಮಗಳ ಕುರಿತು ಚರ್ಚಿಸುವ ನಿರೀಕ್ಷೆಯಿದೆ. ಭೇಟಿಯ ಎರಡನೇ ಚರಣದಲ್ಲಿ

ಪ್ರಧಾನಿ ನರೇಂದ್ರ ಮೋದಿ ಶ್ರೀಲಂಕಾ ಅಧ್ಯಕ್ಷ ಅನುರ ಕುಮಾರ ದಿಸ್ಸಾನಾಯಕೆ ಅವರ ಆಹ್ವಾನದ ಮೇರೆಗೆ ಮುಂದಿನ ತಿಂಗಳು ೪ ರಿಂದ ಮೂರು ದಿನಗಳ ಭೇಟಿಗಾಗಿ ಶ್ರೀಲಂಕಾಕ್ಕೆ ಪ್ರಯಾಣಿಸಲಿದ್ದಾರೆ. ಈ ಭೇಟಿಯ ಸಮಯದಲ್ಲಿ, ಶ್ರೀಲಂಕಾ ಅಧ್ಯಕ್ಷರು ಭಾರತಕ್ಕೆ ಭೇಟಿ ನೀಡಿದಾಗ ಈ ಹಿಂದೆ ಒಪ್ಪಿಕೊಂಡ ಸಹಕಾರದ ಕ್ಷೇತ್ರಗಳ ಪ್ರಗತಿಯನ್ನು ಪರಿಶೀಲಿಸಲು ಪ್ರಧಾನಿಯವರು ಅಧ್ಯಕ್ಷ ದಿಸಾನಾಯಕ ಅವರೊಂದಿಗೆ ಚರ್ಚೆ ನಡೆಸಲಿದ್ದಾರೆ. ಇದೇ ವೇಳೆ ಪ್ರಧಾನಿ, ಹಿರಿಯ ಗಣ್ಯರು ಮತ್ತು ರಾಜಕೀಯ ನಾಯಕರೊಂದಿಗೆ ನಡೆಯುವ ಸಭೆಗಳಲ್ಲಿಯೂ ಭಾಗವಹಿಸಲಿದ್ದಾರೆ. ನಂತರ ಭಾರತದ ಆರ್ಥಿಕ ನೆರವಿನೊಂದಿಗೆ ಜಾರಿಗೆ ತರಲಾದ ಅಭಿವೃದ್ಧಿ ಯೋಜನೆಗಳ ಉದ್ಘಾಟನೆಗಾಗಿ ಅವರು ಅನುರಾಧಪುರಕ್ಕೆ ಪ್ರಯಾಣಿಸಲಿದ್ದಾರೆ.

***********

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ-ಇಸ್ರೋ ತನ್ನ ಬಾಹ್ಯಾಕಾಶ ಡಾಕಿಂಗ್ ಪ್ರಯೋಗ-ಸ್ಪೇಡೆಕ್ಸ್ ಕಾರ್ಯಾಚರಣೆಯ ಭಾಗವಾಗಿ ರೋಲಿಂಗ್ ಪ್ರಯೋಗವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದೆ. ಇದನ್ನು ದೃಢಪಡಿಸಿದ ಇಸ್ರೋ ಅಧ್ಯಕ್ಷ ವಿ ನಾರಾಯಣನ್, ಇಸ್ರೋ ವಿವಿಧ ಪರಿಸ್ಥಿತಿಗಳಲ್ಲಿ ಡಾಕ್ ಮಾಡಬೇಕಾಗುತ್ತದೆ, ಅವುಗಳಲ್ಲಿ ಕೆಲವನ್ನು ಪ್ರಸ್ತುತ ಕಾರ್ಯಾಚರಣೆಯ ಭಾಗವಾಗಿ ಪ್ರಯತ್ನಿಸಲಾಗುವುದು ಎಂದು ಹೇಳಿದರು. "ರೋಲಿಂಗ್" ಅಥವಾ "ರೋಟೇಟಿಂಗ್" ಪ್ರಯೋಗ, ಉಪಗ್ರಹ ಚಲನೆಯ ಮೇಲಿನ ನಿಯಂತ್ರಣವನ್ನು ಪರಿಶೀಲಿಸಲು ಉಪಗ್ರಹಗಳಲ್ಲಿ ಒಂದನ್ನು ಸುತ್ತುವರಿಯುವುದನ್ನು ಒಳಗೊಂಡಿರುತ್ತದೆ. ಡಾಕಿಂಗ್‌ಗಾಗಿ ವಿಭಿನ್ನ ಪರಿಸ್ಥಿತಿಗಳಿಂದ ವಸ್ತುವನ್ನು ಅಪೇಕ್ಷಿತ ಸ್ಥಳಕ್ಕೆ ತರುವುದು ಹೇಗೆ ಎಂಬುದನ್ನು ಅರ್ಥಮಾಡಿಕೊಳ್ಳಲು ಈ ಪ್ರಯೋಗ ಸಹಾಯ ಮಾಡುತ್ತದೆ. ಚಂದ್ರಯಾನ-೪ ದಂತಹ ಭವಿಷ್ಯದ ಕಾರ್ಯಾಚರಣೆಗಳಿಗೆ ನಿರ್ಣಾಯಕವಾದ ಈ ಪ್ರಯೋಗ ಅಮೂಲ್ಯ ಮಾಹಿತಿ ಒದಗಿಸುವ ಜೊತೆಗೆ ಇಸ್ರೋಗೆ ಬಹು ತಂತ್ರಜ್ಞಾನ ಮತ್ತು ಭೂಕೇಂದ್ರ ನಿಯಂತ್ರಣವನ್ನು ಮೌಲ್ಯೀಕರಿಸಲು ಸಹಾಯ ಮಾಡುತ್ತದೆ. ಮಾರ್ಚ್ ೧೩ ರಂದು, ಸ್ಪೇಡೆಕ್ಸ್ ಕಾರ್ಯಾಚರಣೆಯ ಭಾಗವಾಗಿ ಇಸ್ರೋ ಎರಡು ಉಪಗ್ರಹಗಳ ಅನ್‌ಡಾಕಿಂಗ್ ಅನ್ನು ಯಶಸ್ವಿಯಾಗಿ ಪೂರ್ಣಗೊಳಿಸಿತು. ಈ ಸಾಧನೆಯು ಭಾರತದ ಬಾಹ್ಯಾಕಾಶ ಪರಿಶೋಧನಾ ಪಂiiಣದಲ್ಲಿ ಮಹತ್ವದ ಮೈಲಿಗಲ್ಲಾಗಿದೆ. ಇಸ್ರೋ ಅಧ್ಯಕ್ಷ ವಿ ನಾರಾಯಣನ್,

ಸ್ಪೇಡೆಕ್ಸ್‌ನ ಭಾಗವಾಗಿ ಇಸ್ರೋ ಇನ್ನು ಹೆಚ್ಚಿನ ಡಾಕಿಂಗ್ ಕಾರ್ಯಾಚರಣೆ ನಡೆಸಲಿದೆ ಎಂದು ಹೇಳಿದರು.

***********

ರಾಜ್ಯಸಭೆಯಲ್ಲಿಂದು ಸಮಾಜವಾದಿ ಪಕ್ಷದ ಸಂಸದ ರಾಮ್‌ಜಿ ಲಾಲ್ ಸುಮನ್ ಅವರು ರಾಣಾ ಸಂಗ ಅವರ ವಿರುದ್ಧ ಆಕ್ಷೇಪಾರ್ಹ ಹೇಳಿಕೆ ನೀಡಿದ್ದಾರೆ ಎಂಬ ಆರೋಪದ ಮೇಲೆ ಗದ್ದಲದ ವಾತಾವರಣ ಸೃಷ್ಟಿಯಾಯಿತು. ಪರಿಣಾಮ ಸದನವನ್ನು ಮಧ್ಯಹ್ನ ೧೨ ಗಂಟೆಯವರೆಗೆ ಮುಂದೂಡಲಾಗಿತ್ತು. ಇಂದು ಬೆಳಿಗ್ಗೆ ಸದನ ಸಭೆ ಸೇರಿದಾಗ, ಆಡಳಿತ ಪಕ್ಷದ ಸದಸ್ಯರು ಈ ವಿಷಯವನ್ನು ಪ್ರಸ್ತಾಪಿಸಿ, ಸುಮನ್ ಅವರು, ಅವರ ಹೇಳಿಕೆಗಳಿಗೆ ಕ್ಷಮೆಯಾಚಿಸಬೇಕೆಂದು ಒತ್ತಾಯಿಸಿದರು. ಇದೇ ವೇಳೆ ರಾಜ್ಯಸಭೆ ಸಭಾಪತಿ ಹಾಗೂ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಯಾವುದೇ ರಾಷ್ಟ್ರೀಯ ನಾಯಕರನ್ನು ಅವಮಾನಿಸಬಾರದು ಮತ್ತು ಅಂತಹ ವ್ಯಕ್ತಿಗಳ ಬಗ್ಗೆ ಟೀಕೆ-ಟಿಪ್ಪಣಿಗಳನ್ನು ಮಾಡುವಾಗ ಸದಸ್ಯರು ಬಹಳ ಸೂಕ್ಷ್ಮತೆಯಿಂದ ವರ್ತಿಸಬೇಕು ಜನರ ಭಾವನೆಗಳಿಗೆ ನೋವುಂಟುಮಾಡುವಂತಹ ಹೇಳಿಕೆಗಳನ್ನು ನೀಡಬಾರದು ಎಂದು ಹೇಳಿದರು.

ಧ್ವನಿ: ಜಗದೀಪ್ ಧನ್‌ಕರ್ ೨೪ ಸೆಕೆಂಡ್

ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಮಾತನಾಡಿ, ಸದಸ್ಯರು ಸಭಾಪತಿಗಳು ಹೇಳಿದ್ದನ್ನು ಅನುಸರಿಸಬೇಕು ಮತ್ತು ರಾಷ್ಟ್ರೀಯ ನಾಯಕರನ್ನು ಅವಮಾನಿಸಬಾರದು ಎಂದು ಹೇಳಿದರು. ಈ ವೇಳೆ ಮಾತನಾಡಿದ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ, ದೇಶಕ್ಕಾಗಿ ಹೋರಾಡಿದ ಪ್ರತಿಯೊಬ್ಬರನ್ನು ಗೌರವಿಸಬೇಕು. ಆದಾಗ್ಯೂ, ಸಂಸದರ ಮನೆಯ ಮೇಲೆ ದಾಳಿ ನಡೆಸಿ ಪ್ರತಿಭಟನಾಕಾರರು ಕಾನೂನನ್ನು ಕೈಗೆತ್ತಿಕೊಳ್ಳುವುದು ಸೂಕ್ತವಲ್ಲ ಎಂದು ಅವರು ಹೇಳಿದರು.

***********

ದೆಹಲಿ ಹೈಕೋರ್ಟ್ ನ್ಯಾಯಾಧೀಶ ನ್ಯಾಯಮೂರ್ತಿ ಯಶವಂತ್ ವರ್ಮಾ ಅವರ ನಿವಾಸದಲ್ಲಿ ಭಾರಿ ಪ್ರಮಾಣದ ಸುಟ್ಟ ನಗದು ಹಣ ಪತ್ತೆಯಾದ ಹಿನ್ನೆಲೆಯಲ್ಲಿ ದೆಹಲಿ ಪೊಲೀಸರು ತಕ್ಷಣ

ಕ್ರಮಕೈಗೊಳ್ಳಬೇಕು ಮತ್ತು ಸಮಗ್ರ ತನಿಖೆ ನಡೆಸಬೇಕೆಂದು ಕೋರಿ ಸಲ್ಲಿಸಲಾದ ಅರ್ಜಿಯನ್ನು ಸುಪ್ರೀಂಕೋರ್ಟ್ ಇಂದು ವಿಚಾರಣೆ ನಡೆಸಲಿದೆ. ನ್ಯಾಯಮೂರ್ತಿಗಳಾದ ಅಭಯ್ ಎಸ್. ಓಕ್ ಮತ್ತು ಉಜ್ವಲ್ ಭುಯಾನ್ ಅವರಿರುವ ಪೀಠ ಈ ಅರ್ಜಿಯ ವಿಚಾರಣೆ ನಡೆಸಲಿದೆ. ನ್ಯಾಯಮೂರ್ತಿ ವರ್ಮಾ ಅವರ ನಿವಾಸದಲ್ಲಿ ಆಕಸ್ಮಿಕವಾಗಿ ಸಂಭವಿಸಿದ ಬೆಂಕಿಯಲ್ಲಿ ಸೂಕ್ತ ಲೆಕ್ಕವಿಲ್ಲದ ಹಣ ಪತ್ತೆಯಾಗಿದ್ದು, ಅವರ ಮೇಲೆ ತೀವ್ರ ನಿಗಾ ವಹಿಸಲಾಗಿದೆ. ಇದಕ್ಕೆ ಪ್ರತಿಕ್ರಿಯೆಯಾಗಿ, ಸುಪ್ರೀಂ ಕೋರ್ಟ್ ಕೊಲಿಜಿಯಂ, ನ್ಯಾಯಮೂರ್ತಿ ವರ್ಮಾ ಅವರನ್ನು ಅಲಹಾಬಾದ್ ಹೈಕೋರ್ಟ್‌ಗೆ ವಾಪಸ್ ಕಳುಹಿಸಲು ನಿರ್ಧರಿಸಿತು. ಆದಾಗ್ಯೂ, ನ್ಯಾಯಮೂರ್ತಿ ವರ್ಮಾ, ಮಾಧ್ಯಮಗಳಲ್ಲಿ ತಮ್ಮ ಮಾನಹಾನಿ ಮಾಡಲಾಗುತ್ತಿದೆ ಎಂದು ಆರೋಪಿಸಿ, ತಮ್ಮ ವಿರುದ್ಧದ ಆರೋಪಗಳನ್ನು ತಳ್ಳಿಹಾಕಿದ್ದಾರೆ.

***********

ಫ್ರಾನ್ಸ್‌ನ ಪ್ಯಾರಿಸ್‌ನಲ್ಲಿ ಉಕ್ರೇನ್‌ಗಾಗಿ ೪ನೇ ಶಾಂತಿ ಮತ್ತು ಭದ್ರತಾ ಸಭೆಯಲ್ಲಿ ಪ್ರಮುಖ ಐರೋಪ್ಯ ನಾಯಕರು ಭಾಗವಹಿಸಿದ್ದರು. ಸಭೆಯ ಬಳಿಕ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ, ಯುದ್ಧ ನ್ಯಾಯಯುತ ಹಾಗೂ ಶಾಂತಿಯಲ್ಲಿ ಕೊನೆಗೊಳ್ಳುವವರೆಗೆ ರಷ್ಯಾದ ವಿರುದ್ಧ ಯಾವುದೇ ನಿರ್ಬಂಧಗಳನ್ನು ತೆಗೆದುಹಾಕದಿರಲು ಭಾಗವಹಿಸಿದ ಎಲ್ಲಾ ರಾಷ್ಟ್ರಗಳು ಸಹಮತ ವ್ಯಕ್ತಪಡಿಸಿವೆ ಎಂದು ಹೇಳಿದರು. ಈ ಶೃಂಗಸಭೆಯು ಐರೋಪ್ಯ ಏಕತೆಯ ಮತ್ತೊಂದು ನಿದರ್ಶನವಾಗಿದೆ ಎಂದು ಐರೋಪ್ಯ ಆಯೋಗದ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ಹೇಳಿದರು. ವೀಡಿಯೊ ಸಂದೇಶದಲ್ಲಿ ಅವರು, ಉಕ್ರೇನ್‌ಗೆ ಆರ್ಥಿಕವಾಗಿ ಮತ್ತು ಮಿಲಿಟರಿ ಮಟ್ಟದಲ್ಲಿ ಬೆಂಬಲ ನೀಡುವ ಬಗ್ಗೆ ವಿಸ್ತೃತ ಚರ್ಚೆ ನಡೆದಿದೆ ಎಂದು ಅವರು ಹೇಳಿದರು.

ಧ್ವನಿ: ಉರ್ಸುಲಾ ೨೩ ಸೆಕೆಂಡ್

***********

ಎಟಿಪಿ ಮಾಸ್ಟರ್ಸ್ ೧೦೦೦ ಟೆನಿಸ್ ಪಂದ್ಯಾವಳಿಯಲ್ಲಿ ಸೆಮಿಫೈನಲ್ ಪ್ರವೇಶಿಸಿದ ಅತ್ಯಂತ ಹಿರಿಯ ಆಟಗರ ಎಂಬ ಹೆಗ್ಗಳಿಕೆಗೆ ನೊವಾಕ್ ಜೊಕೊವಿಕ್ ಪಾತ್ರರಾಗಿದ್ದಾರೆ. ೩೭ ವರ್ಷದ ಸೆರ್ಬಿಯಾದ ಆಟಗಾರ ಇಂದು ಬೆಳಗಿನ ಜಾವ ಮಿಯಾಮಿ ಓಪನ್‌ನ ಕ್ವಾರ್ಟರ್ ಫೈನಲ್‌ನಲ್ಲಿ ಅಮೆರಿಕದ ಸೆಬಾಸ್ಟಿಯನ್ ಕೊರ್ಡಾ ಅವರನ್ನು ೬-೩ ೭-೬ ಅಂತರದಿಂದ ಸೋಲಿಸುವ ಮೂಲಕ ಈ ಸಾಧನೆ ಮಾಡಿದ್ದಾರೆ. ೨೦೧೯ ರಲ್ಲಿ ೩೭ ವರ್ಷ ಮತ್ತು ಏಳು ತಿಂಗಳ ವಯಸ್ಸಿನಲ್ಲಿ ಇಂಡಿಯನ್ ವೆಲ್ಸ್ ಮತ್ತು ಮಿಯಾಮಿ ಓಪನ್‌ನಲ್ಲಿ ಅಂತಿಮ ನಾಲ್ಕರೊಳಗೆ ಪ್ರವೇಶಿಸಿದ್ದ ರೋಜರ್ ಫೆಡರರ್ ಅವರನ್ನು ಅವರು ಹಿಂದಿಕ್ಕಿದ್ದಾರೆ. ಫ್ಲೋರಿಡಾದ ಮಿಯಾಮಿ ಗಾರ್ಡನ್ಸ್‌ನಲ್ಲಿರುವ ಹಾರ್ಡ್ ರಾಕ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಏಳನೇ ಮಿಯಾಮಿ ಓಪನ್ ಪಂದ್ಯದಲ್ಲಿ ನೊವಾಕ್ ಜೊಕೊವಿಕ್, ಬಲ್ಗೇರಿಯನ್ ಗ್ರಿಗರ್ ಡಿಮಿಟ್ರೋವ್ ಅವರನ್ನು ಎದುರಿಸಲಿದ್ದಾರೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೧೧.೩೦ಕ್ಕೆ ಆರಂಭವಾಗಲಿದೆ.

***********

ಚೆನ್ನೈನ ಎಂ.ಎ.ಚಿದಂಬರಂ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ತಂಡ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ಎದುರಿಸಲಿದೆ. ಪಂದ್ಯ ಸಂಜೆ ೭:೩೦ಕ್ಕೆ ಆರಂಭವಾಗಲಿದೆ. ಹೈದರಾಬಾದ್‌ನ ರಾಜೀವ್‌ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧ ಲಕ್ನೋ ಸೂಪರ್ ಜೈಂಟ್ಸ್ ತಂಡ ೫ ವಿಕೆಟ್ ಜಯ ಸಾಧಿಸಿದೆ.

***********

ಜಾರ್ಖಂಡ್‌ನ ರಾಂಚಿಯಲ್ಲಿ ಇಂದು ನಡೆಯಲಿರುವ ರಾಷ್ಟ್ರೀಯ ಮಹಿಳಾ ಹಾಕಿ ಲೀಗ್ ೨೦೨೪-೨೫ರ ಫೈನಲ್ ಪಂದ್ಯದಲ್ಲಿ 'ಹಾಕಿ ಹರಿಯಾಣ' ಮತ್ತು 'ಒಡಿಶಾ ಹಾಕಿ ಅಸೋಸಿಯೇಷನ್' ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೬ ಗಂಟೆಗೆ ಆರಂಭವಾಗಲಿದೆ. ಹಾಕಿ ಜಾರ್ಖಂಡ್ ೩ ಮತ್ತು ೪ನೇ ಸ್ಥಾನಕ್ಕಾಗಿ ಹಾಕಿ ಮಿಜೋರಾಂ ವಿರುದ್ಧ ಸ್ಪರ್ಧಿಸಲಿದೆ.

**********